# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 749 |
| ಸದಸ್ಯರ ಹೆಸರು | ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ದಿನಾಂಕ | 26.07.2019 |
| ಉತ್ತರಿಸುವ ಸಚಿವರು | ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು. |
| | |
| **ಪ್ರಶ್ನೆಗಳು** | **ಉತ್ತರಗಳು** |
| ಅ) ಮಾಹಿತಿ ತಂತ್ರಜ್ಞಾನವು ಬೆಂಗಳೂರಿನಲ್ಲಿಯೇ ಕೇಂದ್ರೀಕೃತವಾಗಿದ್ದು, ಇದರಿಂದ ಜನದಟ್ಟಣೆ ಹೆಚ್ಚಾಗಿದ್ದು ನೀರು, ವಿದ್ಯುತ್ ವಾಹನ ದಟ್ಟಣೆ ಹಾಗೂ ಇನ್ನಿತರೆ ಸಮಸ್ಯೆಗಳು ಉಲ್ಬಣಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: | ಹೌದು. |
| ಆ) ರಾಜ್ಯದ ಉತ್ತರ ಭಾಗದಲ್ಲಿ ಈ ತಂತ್ರಜ್ಞಾನದ ಪಾರ್ಕ್‌ಗಳನ್ನು ಸ್ಥಾಪಿಸಿ ಮೂಲಭೂತ ಸೌಕರ್ಯಗಳನ್ನು ಒದಗಿಸುವಲ್ಲಿ ಸರ್ಕಾರದ ನಿಲುವೇನು: | ರಾಜ್ಯದ ಉತ್ತರ ಭಾಗದಲ್ಲಿ ಸರ್ಕಾರದ ವತಿಯಿಂದ ಈಗಾಗಲೇ ಧಾರವಾಡ ಜಿಲ್ಲೆಯ ಹುಬ್ಬಳ್ಳಿಯಲ್ಲಿ ಹಾಗೂ ಸರ್ಕಾರದ ಅಧೀನ ಸಂಸ್ಥೆಯಾದ ಕಿಯೋನಿಕ್ಸ್ ವತಿಯಿಂದ ಕಲಬುರ್ಗಿ ಜಿಲ್ಲೆಯಲ್ಲಿ ಮಾಹಿತಿ ತಂತ್ರಜ್ಞಾನ ಪಾರ್ಕ್‌ಗಳನ್ನು ಸ್ಥಾಪಿಸಲಾಗಿದ್ದು, ಮೂಲಭೂತ ಸೌಕರ್ಯಗಳನ್ನು ಒದಗಿಸಲಾಗಿರುತ್ತದೆ. |
| ಇ) ಈ ತಂತ್ರಜ್ಞಾನದ ಉದ್ಯೋಗವನ್ನು ರಾಜ್ಯದ ಉತ್ತರ ಭಾಗದ ಉತ್ತೇಜಕವಾದ ಜಿಲ್ಲೆಗಳಿಗೆ ವಿಕೇಂದ್ರಿಕರಿಸುವುದರಿಂದ ಬೆಂಗಳೂರಿಗೆ ಒತ್ತಡ ಕಡಿಮೆಯಾಗುವುದರೊಂದಿಗೆ ರಾಜ್ಯದ ಇತರ ಭಾಗಗಳ ಸಮತೋಲನ ಬೆಳವಣಿಗೆಗೆ ಸರ್ಕಾರ ಏನು ಕ್ರಮ ಕೈಗೊಂಡಿದೆ: | ಈ ಮಾಹಿತಿ ತಂತ್ರಜ್ಞಾನ ಉದ್ಯೋಗವನ್ನು ರಾಜ್ಯದ ಉತ್ತರ ಭಾಗದ ಉತ್ತೇಜಕವಾದ ಜಿಲ್ಲೆಗಳಿಗೆ ವಿಕೇಂದ್ರಿಕರಿಸುವುದರಿಂದ ಬೆಂಗಳೂರಿಗೆ ಒತ್ತಡ ಕಡಿಮೆಯಾಗುವುದರೊಂದಿಗೆ ರಾಜ್ಯದ ಇತರ ಭಾಗಗಳ ಸಮತೋಲನ ಬೆಳವಣಿಗೆಗಾಗಿ ಸರ್ಕಾರವು ಈ ಕೆಳಕಂಡ ಕ್ರಮಗಳನ್ನು ಕೈಗೊಂಡಿರುತ್ತದೆ:-<br>1) ಈಗಾಗಲೇ ಹುಬ್ಬಳ್ಳಿಯಲ್ಲಿ ಹಾಗೂ ಕಲಬುರ್ಗಿಯಲ್ಲಿ ಮಾಹಿತಿ ತಂತ್ರಜ್ಞಾನ ಪಾರ್ಕ್ ಗಳನ್ನು ಸ್ಥಾಪಿಸಲಾಗಿದೆ.<br>2) ಕಿಯೋನಿಕ್ಸ್ ವತಿಯಿಂದ ಮಾಹಿತಿ ತಂತ್ರಜ್ಞಾನ ಕ್ಷೇತ್ರದಲ್ಲಿ ವಿದ್ಯಾವಂತ ನಿರುದ್ಯೋಗಿಗಳಿಗೆ ಉದ್ಯೋಗಾವಕಾಶ ಕಲ್ಪಿಸಲು ಹಾಗೂ ಉದ್ದಿಮೆದಾರರನ್ನಾಗಿ ಮಾಡಲು ವಿವಿಧ ರೀತಿಯ ಕಂಪ್ಯೂಟರ್ ತರಬೇತಿಯನ್ನು ನೀಡಲಾಗುತ್ತಿದೆ.<br>3) ಉತ್ತರ ಕರ್ನಾಟಕದ ಧಾರವಾಡ, ಬೆಳಗಾವಿ, ಕಲಬುರ್ಗಿ, ಬಾಗಲಕೋಟೆ ಮತ್ತು ವಿಜಯಪುರ ಜಿಲ್ಲೆಗಳಲ್ಲಿ ಸ್ವಂತ ಉದ್ಯಮಶೀಲತೆ ಆರಂಭಿಸಲು ಸದರಿ ಜಿಲ್ಲೆಗಳ ಆಯ್ದ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ನ್ಯೂ ಏಜ್ ಇನ್‌ಕುಬೇಷನ್ ಕೇಂದ್ರಗಳನ್ನು ಸ್ಥಾಪಿಸಲಾಗಿದೆ.<br>4) ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದ ಸಹಯೋಗದೊಂದಿಗೆ ಟ್ರೇನ್ ದಿ ಟ್ರೇನರ್ ಹಾಗೂ ಕೆಪ್ಯಾಸಿಟಿ ಬಿಲ್ಡಿಂಗ್ ಕಾರ್ಯಕ್ರಮಗಳನ್ನು ಕಲಬುರ್ಗಿ, ರಾಯಚೂರು, ಬಳ್ಳಾರಿ ಮತ್ತು ಬೀದರ್ ಜಿಲ್ಲೆಗಳಲ್ಲಿ ನಡೆಸಲಾಗುತ್ತಿದೆ.<br>5) ಇದಲ್ಲದೆ, ಮಾಹಿತಿ ತಂತ್ರಜ್ಞಾನ ಉದ್ದಿಮೆಗಳನ್ನು ಸ್ಥಾಪಿಸುವ |

| | |
|---|---|
| | ಉದ್ದಿಮೆದಾರರಿಗೆ, ಸರ್ಕಾರವು ಘೋಷಿಸಿರುವ i4 ನೀತಿಯಲ್ಲಿ ಈ ಕೆಳಕಂಡ ಸೌಲಭ್ಯಗಳನ್ನು ಒದಗಿಸಲಾಗಿದೆ:-<br>ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಹೊರವಲಯದಲ್ಲಿ ಉದ್ಯೋಗ ಉತ್ತೇಜನಾಧಾರಿತ ಭೂ ಹಂಚಿಕೆ.<br>ಆ) Startup ಕಂಪನಿಗಳನ್ನು ಪ್ರಾರಂಭಿಸಲು ಅವಕಾಶಗಳು.<br>ಇ) ಏಕ ಗವಾಕ್ಷಿಯಾಗಿ ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆ.<br>ಈ) ಕರ್ನಾಟಕ ಕೈಗಾರಿಕಾ ಉದ್ಯೋಗ, ಆದೇಶ ನಿಯಮ (Standing orders) 1946ರನ್ವಯ IT/ITEs/Knowledge/Startups ಕೈಗಾರಿಕೆಗಳಿಗೆ ವಿನಾಯ್ತಿ.<br>ಉ) IT/ITEs/Startups/Animation/Gaming/Computer Graphics/Telecom/BPO/KPO ಹಾಗೂ ಇತರೆ ಜ್ಞಾನಾಧಾರಿತ ಉದ್ದಿಮೆಗಳನ್ನು ಅವಶ್ಯಕ ಸೇವೆಗಳಿಗಾಗಿ ಪರಿಗಣನೆ.<br>ಊ) ಪಿ.ಎಫ್ ಹಾಗೂ ಇ.ಎಸ್.ಐ. ವಂತಿಗೆಯ ಹಿಂಪಾವತಿ.<br>ಋ) ವಿದ್ಯುತ್‌ಚ್ಛಕ್ತಿ ದರದಲ್ಲಿ ರಿಯಾಯಿತಿ.<br>ಎ) ಸ್ಟ್ಯಾಂಪ್ ಶುಲ್ಕದಲ್ಲಿ ವಿನಾಯಿತಿ. |
| ಈ) ಇಂತಹ ವಿಕೇಂದ್ರಿಕರಣದಿಂದ ರಾಜ್ಯದ ಹಿಂದುಳಿದ ಭಾಗವನ್ನು ಅಭಿವೃದ್ಧಿಪಡಿಸುವುದರೊಂದಿಗೆ ಸ್ಥಳೀಯ ಜನರಿಗೆ ಉದ್ಯೋಗದ ಅವಕಾಶ ದೊರಕಿಸುವುದ ರೊಂದಿಗೆ ಜನರ ಆರ್ಥಿಕ ಮಟ್ಟವನ್ನು ಸುಧಾರಿಸುವ ಬಗ್ಗೆ ಸರ್ಕಾರ ಯೋಚಿಸಿದೆಯೇ: | ಹೌದು. |
| ಉ) ಹಾಗಿದ್ದಲ್ಲಿ, ಇದರ ರೂಪುರೇಷಗಳ ಬಗ್ಗೆ ಮಾಹಿತಿಯನ್ನು ಒದಗಿಸುವುದು? | ರಾಜ್ಯದ ಹಿಂದುಳಿದ ಭಾಗವನ್ನು ಅಭಿವೃದ್ಧಿಪಡಿಸುವುದರೊಂದಿಗೆ ಸ್ಥಳೀಯ ಜನರಿಗೆ ಉದ್ಯೋಗದ ಅವಕಾಶ ದೊರಕಿಸುವುದರೊಂದಿಗೆ ಜನರ ಆರ್ಥಿಕ ಮಟ್ಟವನ್ನು ಸುಧಾರಿಸುವ ಬಗ್ಗೆ ಸರ್ಕಾರವು ರಾಜ್ಯದಲ್ಲಿ ಮಾಹಿತಿ ತಂತ್ರಜ್ಞಾನದ ಅಭಿವೃದ್ಧಿಗಾಗಿ ಈ ಕೆಳಕಂಡ ನೀತಿಗಳನ್ನು ಜಾರಿಗೆ ತಂದಿದೆ:-<br>1. 2014 ನೇ ವರ್ಷದಲ್ಲಿ ಐಟಿ, ಐಟಿಇಎಸ್, ಇನ್ನೋವೇಷನ್ ಇನ್ಸೆಂಟಿವ್ಸ್ (ಐ4) ನೀತಿ,<br>2. 2015 ನೇ ವರ್ಷದಲ್ಲಿ ಕರ್ನಾಟಕ ಸ್ಟಾರ್ಟ್‌ಅಪ್ ನೀತಿ<br>3. 2017 ನೇ ವರ್ಷದಲ್ಲಿ ಕರ್ನಾಟಕ ಎಲೆಕ್ಟ್ರಾನಿಕ್ಸ್ ಸಿಸ್ಟಮ್ ಡಿಸೈನ್ ಮತ್ತು ಮ್ಯಾನುಫ್ಯಾಕ್ಚರಿಂಗ್ ನೀತಿ<br>4. 2017 ನೇ ವರ್ಷದಲ್ಲಿ ಕರ್ನಾಟಕ ಅನಿಮೇಷನ್, ವಿಷ್ಯುವಲ್ ಎಫೆಕ್ಟ್ಸ್, ಗೇಮಿಂಗ್ & ಕಾಮಿಕ್ಸ್ ನೀತಿ. |

ಸಂಖ್ಯೆ: ಐಟಿಬಿಟಿ 21 ಎಲ್‌ಸಿಎಂ 2019

**(ಡಾ|| ಅಶ್ವಥ್ ನಾರಾಯಣ ಸಿ.ಎನ್)**

ಉಪ ಮುಖ್ಯಮಂತ್ರಿ ಹಾಗೂ
ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ
ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು.